ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

6

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಪರಿಷತ್ತು [illegible]

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ

ದಿನಾಂಕ : DATE 7/2/21

# ಮುಖ್ಯಮಂತ್ರಿಗಳ ಕ್ರಮಕ್ಕೆ ಸ್ವಾಗತ: ಹೊರಟ್ಟಿ

ಬೆಂಗಳೂರು: ರಾಜ್ಯದ ಲಿಂಗಾಯತ ಪಂಚಮಸಾಲಿ ಸಮುದಾಯಕ್ಕೆ ಹಿಂದುಳಿದ ವರ್ಗಗಳ 2ಎ ಮೀಸಲಾತಿ ಕಲ್ಪಿಸಬೇಕೆಂಬ ಹಕ್ಕೊತ್ತಾಯ ಸಂಬಂಧ ಸಮಗ್ರ ಅಧ್ಯಯನ ನಡೆಸಿ ವರದಿ ನೀಡುವಂತೆ ಮುಖ್ಯಮಂತ್ರಿಗಳು ರಾಜ್ಯ ಹಿಂದುಳಿದ ವರ್ಗಗಳ ಆಯೋಗಕ್ಕೆ ಸೂಚನೆ ನೀಡಿರುವುದನ್ನು ಜೆಡಿಎಸ್‌ನ ವಿಧಾನ ಪರಿಷತ್ ಹಿರಿಯ ಸದಸ್ಯ ಬಸವರಾಜ ಹೊರಟ್ಟಿ ಸ್ವಾಗತಿಸಿದ್ದಾರೆ.

ನಗರದಲ್ಲಿ ಜೆಡಿಎಸ್ ಕಚೇರಿ 'ಜೆ.ಪಿ. ಭವನ'ದಲ್ಲಿ ಶನಿವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಮಗ್ರ ಅಧ್ಯಯನ ನಡೆಸಿ ವರದಿ ನೀಡುವಂತೆ ಮುಖ್ಯಮಂತ್ರಿಗಳು ರಾಜ್ಯ ಹಿಂದುಳಿದ ವರ್ಗಗಳ ಆಯೋಗಕ್ಕೆ ಸೂಚಿಸಿರುವುದು ಸರಿಯಾಗಿದೆ. ಮುಖ್ಯಮಂತ್ರಿಗಳು ಶುಕ್ರವಾರ ಸದನದಲ್ಲಿ ಯಾವುದೋ ಒತ್ತಡದಲ್ಲಿ ತಾವು ಯಾವುದೇ ನಿರ್ಧಾರ ತೆಗೆದುಕೊಳ್ಳುವ ಸ್ಥಿತಿಯಲ್ಲಿ ಇಲ್ಲ ಎಂದು ಹೇಳಿರಬಹುದು. ಆಯೋಗದ ವರದಿ ಪಡೆದ ಬಳಿಕ ಕ್ರಮ ವಹಿಸಬಹುದು. ಈಗಾಗಲೇ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷ ಜಯಪ್ರಕಾಶ್ ಹೆಗ್ಡೆ ಅವರೊಂದಿಗೆ ನಾನು ಮಾತನಾಡಿದ್ದೇನೆ ಎಂದು ಹೇಳಿದರು.



## ಸೋಮವಾರ ನಾಮಪತ್ರ

ಸೋಮವಾರ ಬೆಳಗ್ಗೆ 10.15ರಿಂದ 10.30ರೊಳಗೆ ಸಭಾಪತಿ ಸ್ಥಾನಕ್ಕೆ ನಾಮಪತ್ರ ಸಲ್ಲಿಸಲಿದ್ದೇನೆ. ಮಾಜಿ ಸಚಿವರಾದ ಎಚ್.ಡಿ.ರೇವಣ್ಣ ಅವರು ಸಲಹೆ ನೀಡಿರುವ ಅವಧಿಯಲ್ಲೇ ನಾಮಪತ್ರ ಸಲ್ಲಿಸುತ್ತೇನೆ ಎಂದು ವಿಧಾನ ಪರಿಷತ್ ಹಿರಿಯ ಸದಸ್ಯ ಬಸವರಾಜ ಹೊರಟ್ಟಿ ಹೇಳಿದರು.

ಮುಖ್ಯಮಂತ್ರಿಗಳ ನಡೆ ಬಗ್ಗೆ ಪಂಚಮಸಾಲಿ ಮಠದ ಬಸವ ಜಯಮೃತ್ಯುಂಜಯ ಸ್ವಾಮೀಜಿ ನೀಡಿರುವ ಹೇಳಿಕೆಗೆ ನಾನು ಪ್ರತಿಕ್ರಿಯೆ ನೀಡುವುದು ಸೂಕ್ತವಲ್ಲ. ಜನರಿಗೆ ರಾಜಕಾರಣಿಗಳ ಮೇಲೆ ವಿಶ್ವಾಸವಿಲ್ಲದಂತಾಗಿದೆ. ಹಾಗಾಗಿ ಅವರು ಸ್ವಾಮೀಜಿಗಳು ಹೋರಾಟದ ನೇತೃತ್ವ ವಹಿಸಲಿ ಎಂದು ಬಯಸುತ್ತಾರೆ. ಜನರಿಗಾಗಿ ಸ್ವಾಮೀಜಿಗಳು ಹೋರಾಟ ನಡೆಸುತ್ತಿದ್ದಾರೆ ಎಂದು ತಿಳಿಸಿದರು.

ಕೆಲ ಶಾಸಕರು ಪಕ್ಷದ ಚಟುವಟಿಕೆಗಳಿಂದ ದೂರವಿರುವ ಬಗ್ಗೆ ಪ್ರತಿಕ್ರಿಯಿಸಿದ ಅವರು, ಇಬ್ಬರು ಶಾಸಕರು ಮುನಿಸಿಕೊಂಡಿದ್ದು ಸರಿಪಡಿಸಲಾಗುವುದು. ಅವರಿಗೂ ಬೇರೆ ಯಾವುದೇ ಚಿಂತನೆ ಇದ್ದಂತಿಲ್ಲ. ನಮ್ಮಲ್ಲಿನ ಲೋಪಗಳನ್ನು ಸರಿಪಡಿಸಿಕೊಳ್ಳಲಾಗುವುದು. ದೊಡ್ಡವರಿರಲಿ, ಸಣ್ಣವರಿರಲಿ ಲೋಪಗಳನ್ನು ಸರಿಪಡಿಸಿಕೊಂಡು ಮುಂದುವರಿಯಬೇಕಿದೆ. ಹಿಂದೆಲ್ಲಾ ನಾಮ್‌ಕೆವಾಸ್ತೆ ಸಭೆಗಳನ್ನು ನಡೆಸಿ ತಳಮಟ್ಟದಿಂದ ಪಕ್ಷ ಸಂಘಟನೆಗೆ ಒತ್ತು ನೀಡಲಾಗುತ್ತಿದೆ ಎಂದು ಹೇಳಿದರು.

ಪರಿಷತ್‌ನಲ್ಲಿ ಗೋಹತ್ಯೆ ನಿಷೇಧ ಸಂಬಂಧ ವಿಧೇಯಕ ಮಂಡನೆ ಕುರಿತಂತೆ ಪ್ರತಿಕ್ರಿಯಿಸಿದ ಅವರು, ವಿಧೇಯಕ ಮಂಡನೆಯಾದಾಗ ನೋಡೋಣ. ಹಿರಿಯ ನಾಯಕರೆಲ್ಲಾ ಚರ್ಚಿಸಿ ಯಾವ ನಿಲುವು ತೆಗೆದುಕೊಳ್ಳುವರೋ ಅದರಂತೆ ಪಕ್ಷ ಮುಂದುವರಿಯಲಿದೆ. ವಯಸ್ಸಾದ ಜಾನುವಾರುಗಳ ಪೋಷಣೆಗೆ ಸರ್ಕಾರ ಸೂಕ್ತ ವ್ಯವಸ್ಥೆ ಕಲ್ಪಿಸುವುದು ಮುಖ್ಯ. ಸರ್ಕಾರ ಮೊದಲಿಗೆ ಗೋಶಾಲೆಗಳನ್ನು ತೆರೆಯಲಿ ಎಂದು ಹೇಳಿದರು.